# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002

**ಪತ್ರಿಕಾ ಪ್ರಕಟಣೆ** **ದಿನಾಂಕ:21.04.2020**

**<u>ಸನ್ಮಾನ್ಯ ಮುಖ್ಯಮಂತ್ರಿಗಳು ರವರಿಂದ "ಹೋಮ್ ಡಿಲಿವರಿ ಸಹಾಯವಾಣಿ"ಗೆ ಚಾಲನೆ:</u>**




ಕೋವಿಡ್-19 ಹಿನ್ನೆಲೆ ನಾಗರೀಕರಿಗೆ ಅಗತ್ಯ ಸೇವೆಗಳನ್ನು ಮನೆ-ಮನೆಗೆ ತಲುಪಿಸುವ ಉದ್ದೇಶದಿಂದ ನಗರಾದ್ಯಂತ "ಹೋಮ್ ಡಿಲಿವೆರಿ ಸಹಾಯವಾಣಿ"ಗೆ ಸನ್ಮಾನ್ಯ ಮುಖ್ಯಮಂತ್ರಿಗಳು, ಪೂಜ್ಯ ಮಹಾಪೌರರು ರವರು ಇಂದು ಗೃಹ ಕಛೇರಿ ಕೃಷ್ಣದಲ್ಲಿ ಚಾಲನೆ ನೀಡಿದರು. ಈ ವೇಳೆ ಉಪಮುಖ್ಯಮಂತ್ರಿಗಳು ಡಾ. ಸಿ.ಎನ್.ಅಶ್ವತ್ಥ ನಾರಾಯಣ್, ಸಂಸದರಾದ ಶ್ರೀ ಪಿ.ಸಿ.ಮೋಹನ್, ಶ್ರೀ ತೇಜಸ್ವಿ ಸೂರ್ಯ, ಕಂದಾಯ ಸಚಿವರು ಶ್ರೀ ಆರ್.ಅಶೋಕ್, ರಾಜ್ಯ ಸಭಾ ಸದಸ್ಯರು ರಾಜೀವ್ ಚಂದ್ರಶೇಖರ್, ಉಪಮಹಾಪೌರರು ಶ್ರೀ ರಾಮಮೋಹನ ರಾಜು, ಆಡಳಿತ ಪಕ್ಷದ ನಾಯಕರು ಶ್ರೀ ಮುನೀಂದ್ರ ಕುಮಾರ್, ಆಯುಕ್ತರು ಶ್ರೀ ಬಿ.ಹೆಚ್.ಅನಿಲ್ ಕುಮಾರ್ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಕೋವಿಡ್-18 ಹಿನ್ನೆಲೆ ಲಾಕ್ ಡೌನ್ ಜಾರಿಯಿರುವ ವೇಳೆ ನಗರದ ನಾಗರೀಕರಿಗೆ ಅಗತ್ಯ ವಸ್ತುಗಳನ್ನು ಮನೆಬಾಗಿಲಿಗೆ ತಲುಪಿಸುವ ನಿಟ್ಟಿನಲ್ಲಿ ಬಿಬಿಎಂಪಿ ಮತ್ತು ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ವತಿಯಿಂದ "ಹೋಮ್ ಡಿಲಿವರಿ ಸಹಾಯವಾಣಿ"ಯನ್ನು ನಗರಾದ್ಯಂದ ವಿಸ್ತರತಿಸಲಾಗಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಹೋಮ್ ಡಿಲಿವರಿ ಸಹಾಯವಾಣಿಯನ್ನು ಉದ್ದೇಶಿಸಿ ಮಾತನಾಡಿ ಮುಖ್ಯಮಂತ್ರಿಗಳು, ನಾಗರೀಕರ ಸುರಕ್ಷತೆಯ ದೃಷ್ಟಿಯಿಂದ ಸಂಸದರಾದ ತೇಜಸ್ವಿ ಸೂರ್ಯ ರವರು ಬೆಂಗಳೂರು ದಕ್ಷಿಣದಲ್ಲಿ ಹೋಮ್ ಡಿಲಿವರಿ ಸೇವೆ ಪ್ರಾರಂಭಿಸಿ, ಕಳೆದ 7 ದಿನಗಳಲ್ಲಿ ಬೆಂಗಳೂರು ದಕ್ಷಿಣದಲ್ಲಿ 11,000ಕ್ಕೂ ಹೆಚ್ಚು ಗ್ರಾಹಕರಿಗೆ ಸೇವೆಯನ್ನು ತಲುಪಿಸಿ ಯಶಸ್ವಿಯಾಗಿದ್ದಾರೆ. ಸಾರ್ವಜನಿಕರು **080-61914960**ಗೆ ವಾಟ್ಸ್ಆಪ್ ಅಥವಾ ಕರೆ ಮಾಡಿ ದಿನಸಿ, ತರಕಾರಿ, ಔಷಧಿ ಸೇರಿದಂತೆ ಅಗತ್ಯ ಸಾಮಗ್ರಿಗಳನ್ನು ಮನೆಬಾಗಲಿಗೆ ತರಸಿಕೊಳ್ಳಬಹುದು. ಮನೆಗಳ ಪಕ್ಕದಲ್ಲಿರುವ ಸಣ್ಣ ಅಂಗಡಿಗಳ ಮೂಲಕ ದಿನಸಿಗಳನ್ನು ತಲುಪಿಸುವ ವ್ಯವಸ್ಥೆಮಾಡಿರುವುದು ದೇಶದಲ್ಲಿ ಇದೇ ಮೊದಲು ಎಂದರು.

ಸಾರ್ವಜನಿಕರು ಆಚೆ ಬಂದು ಆಹಾರ ಸಾಮಗ್ರಿಗಳನ್ನು ಕೊಳ್ಳುವುದನ್ನು ತಪ್ಪಿಸುವ ಉದ್ದೇಶದಿಂದ ಈ ಕ್ರಮವನ್ನು ಕೈಗೊಳ್ಳಲಾಗಿದ್ದು, ಗ್ರಾಹಕರು ಸಲ್ಲಿಸುವ ಆರ್ಡರ್‌ಗಳನ್ನು ಸಮೀಪದ ಅಂಗಡಿಗಳಿಗೆ ವರ್ಗಾಯಿಸುವ ಮೂಲಕ ಕಾರ್ಯನಿರ್ವಹಿಸಲಾಗುತ್ತದೆ. ಈ ಹೋಮ್ ಡಿಲಿವರಿ ಸೇವೆಯಲ್ಲಿ 18,000ಕ್ಕೂ ಹೆಚ್ಚು ದಿನಸಿ, ತರಕಾರಿ, ಔಷಧಿ ಮಳಿಗೆಗಳು ಜಿಯೋ ಮ್ಯಾಪಿಂಗ್ ಮೂಲಕ ನೊಂದಾವಣಿಗೊಂಡಿರುತ್ತವೆ. ಹೋಮ್ ಡಿಲಿವರಿ ಸೇವೆಗೆ ಸಾರ್ವಜನಿಕರು 10 ರೂ. ಪಾವತಿಸಬೇಕಾಗಿರುತ್ತದೆ. ಖಾಸಗಿ ಸಂಸ್ಥೆಗಳ 5,000ಕ್ಕೂ ಹೆಚ್ಚು ಡಿಲಿವರಿ ಸಿಬ್ಬಂದಿಯನ್ನು ನಿಯೋಜನೆ ಮಾಡಿಕೊಳ್ಳಲಾಗಿದೆ. ಸಾರ್ವಜನಿಕರು ಹಾಗೂ ಅಂಗಡಿ ಮಾಲೀಕರು ಈ ಸಹಾಯವಾಣಿಯನ್ನು ಸದುಪಯೋಗಪಡಿಸಿಕೊಂಡು ಕೋರೋನಾ ವಿರುದ್ಧ ಗೆಲುವು ಸಾಧಿಸಲು ಸಹಕರಿಸಲು ತಿಳಿಸಿದರು.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**